# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 23 ತಂಎಇ 2012

ಕರ್ನಾಟಕ ಸರ್ಕಾರದ ಸಚಿವಾಲಯ,
6ನೇ ಮಹಡಿ, 2ನೇ ಹಂತ,
ಕೊಠಡಿ ಸಂಖ್ಯೆ:607, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 04/09/2013.

## ಸುತ್ತೋಲೆ

ವಿಷಯ : ಸಚಿವಾಲಯದಲ್ಲಿರುವಂತೆ ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ Bio-Metric ಹಾಜರಾತಿ ಪದ್ಧತಿಯನ್ನು ಅಳವಡಿಸುವ ಬಗ್ಗೆ

-----

ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ಈಗಾಗಲೇ ಸರ್ಕಾರಿ ಅಧಿಕಾರಿಗಳಿಗೆ/ನೌಕರರಿಗೆ ಹಾಜರಾತಿಯ ಪದ್ಧತಿಯನ್ನು ಬಯೋಮೆಟ್ರಿಕ್ ಮೂಲಕ ಅಳವಡಿಸಿರುವುದು ಸರಿಯಷ್ಟೆ. ಸದರಿ ಬಯೋಮೆಟ್ರಿಕ್ ಪದ್ಧತಿಯು ಇಲ್ಲದೇ ಇರುವ ಕಛೇರಿಯಲ್ಲಿ, ಅಧಿಕಾರಿ/ನೌಕರರ ಹಾಜರಾತಿಯಲ್ಲಿ ಏರುಪೇರು, ಕಛೇರಿಯ ಕಾರ್ಯನಿರ್ವಹಣೆಯಲ್ಲಿ ಹಾಗೂ ಶಿಸ್ತು ಪಾಲನೆಯಲ್ಲಿ ಕೊರತೆ ಕಂಡು ಬಂದಿರುತ್ತದೆ. ಆದ್ದರಿಂದ ಬಯೋಮೆಟ್ರಿಕ್ ಪದ್ಧತಿಯನ್ನು ಇತರ ಇಲಾಖೆಗಳಲ್ಲೂ ಅಳವಡಿಸುವಂತೆ ಕ್ರಮವಹಿಸಬೇಕಾಗಿರುವ ಅವಶ್ಯಕತೆಯನ್ನು ಮನಗಂಡಿದೆ.

ಹಾಗಾಗಿ ಸಚಿವಾಲಯದಲ್ಲಿರುವಂತೆಯೇ ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಬಯೋಮೆಟ್ರಿಕ್ ಅಳವಡಿಸುವುದನ್ನು ಜಾರಿಗೊಳಿಸಲು ಉದ್ದೇಶಿಸಿದ್ದು, ಈ ಕೆಳಕಂಡ ಸೂಚನೆಗಳನ್ನು ತಪ್ಪದೇ ಕಟ್ಟು ನಿಟ್ಟಾಗಿ ಪಾಲಿಸಬೇಕೆಂದು ಈ ಮೂಲಕ ಸೂಚಿಸಲಾಗಿದೆ.

1. ಬಯೋಮೆಟ್ರಿಕ್ ಪದ್ಧತಿಯನ್ನು ಎಲ್ಲಾ ಕಛೇರಿಗಳಲ್ಲಿ 1ನೇ ನವೆಂಬರ್ 2013ರಿಂದ ಜಾರಿಗೆ ಬರುವಂತೆ ಕಡ್ಡಾಯವಾಗಿ ಅನುಷ್ಠಾನಿಸಲು ಕ್ರಮಕೈಗೊಳ್ಳತಕ್ಕದ್ದು.
2. ಬಯೋಮೆಟ್ರಿಕ್ ಪದ್ಧತಿಯನ್ನು ಅಳವಡಿಸಲು ತಗಲುವ ವೆಚ್ಚವನ್ನು ಆಯಾ ಇಲಾಖೆಗೆ ನಿಗದಿಪಡಿಸಲಾದ ಆಯವ್ಯಯದಿಂದ ಭರಿಸುವುದು.
3. ಎಲ್ಲಾ ಇಲಾಖೆಗಳು ತಮ್ಮ ಸಿಬ್ಬಂದಿಗಳ ಸಂಖ್ಯೆಗಳಿಗನುಗುಣವಾಗಿ ರೀಡರ್‌ನ್ನು ಖರೀದಿಸತಕ್ಕದ್ದು. ಇದರೊಂದಿಗೆ ಗಣಕಯಂತ್ರ, ಅಂತರ್ಜಾಲ ಸಂಪರ್ಕ ವ್ಯವಸ್ಥೆಯನ್ನು ಕಲ್ಪಿಸ ಬೇಕಾಗುತ್ತದೆ. ಸದರಿ ಪರಿಕರಗಳನ್ನು ಇ-ಆಡಳಿತ ಇಲಾಖೆಯು ಗುರುತಿಸಿರುವ ಸರಬರಾಜುದಾರರಿಂದ (empanelled vendors) ಖರೀದಿಸತಕ್ಕದ್ದು.
4. ಸದರಿ ಬಯೋಮೆಟ್ರಿಕ್ ಉಪಕರಣಗಳನ್ನು ಖರೀದಿಸಲು ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಕಾಯ್ದೆಯನ್ನು ಪಾಲಿಸತಕ್ಕದ್ದು.
5. ಇದಕ್ಕೆ ಬೇಕಾಗುವ ತಂತ್ರಾಂಶವನ್ನು NIC/e-Governance ಇಲಾಖೆರವರಿಂದ ಪಡೆಯತಕ್ಕದ್ದು. ಬಯೋಮೆಟ್ರಿಕ್ ಪದ್ಧತಿಯನ್ನು ತಮ್ಮ ಕಛೇರಿಗಳಲ್ಲಿ ಅನುಷ್ಠಾನಗೊಳಿಸಲು ಸಿಸ್ಟಂ ಅನಾಲೈಸ್ಟ್ ಹಾಗೂ ಪ್ರೋಗ್ರಾಮರ್ ಸೇವೆಯನ್ನು ತಾತ್ಕಾಲಿಕವಾಗಿ ಸಿಆಸುಇ ಇ-ಆಡಳಿತ ಇಲಾಖೆಯ ಮೂಲಕ ಪಡೆಯಲು ಇಲಾಖೆಗಳಿಗೆ ತಿಳಿಸಲಾಗಿದೆ.

(ಡಾ: ಶಾಲಿನಿ ರಜನೀಶ್)
ಸರ್ಕಾರದ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ)
(ನಾಗರೀಕ ಸೇವೆಗಳು ಮತ್ತು ರಾಜಕೀಯ ವಿಶ್ರಾಂತಿ ವೇತನ-2)

ಇವರಿಗೆ:
ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.

ಪ್ರತಿ
1. ಸರ್ಕಾರದ ಪ್ರಧಾನ ಕಾರ್ಯದರ್ಶಿ ಸಿಆಸುಇ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು,(ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಆಯವ್ಯಯ ಮತ್ತು ಸಂಪನ್ಮೂಲ) ಆರ್ಥಿಕ ಇಲಾಖೆ.